## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ನಿರ್ದೇಶಕರು, ಕರ್ನಾಟಕ ರಾಜ್ಯ ಗಿರಿಜನ ಸಂಶೋಧನಾ ಸಂಸ್ಥೆ, ಮೈಸೂರು, ಇವರ ರಜಾ ವೇತನ ಹಾಗೂ ನಿವೃತ್ತಿ ವೇತನ ಅಂಶದಾನಗಳನ್ನು ಪಾವತಿಸಲು ಮಂಜೂರಾತಿ ನೀಡುವ ಬಗ್ಗೆ.

ಓದಲಾಗಿದೆ:
1. ಸರ್ಕಾರದ ಅಧಿಸೂಚನೆ ಸಂಖ್ಯೆ: ಸಕ ಇ 69 ಪವಯೋ 2010, ದಿ: 3-2-2012
2. ಸರ್ಕಾರದ ಆದೇಶ ಸಂಖ್ಯೆ: ಸಕ ಇ 69 ಪವಯೋ 2010, ದಿ: 31-7-2012
3. ಕರ್ನಾಟಕ ರಾಜ್ಯ ಗಿರಿಜನ ಸಂಶೋಧನಾ ಸಂಸ್ಥೆ, ಮೈಸೂರು ಇವರ ಪತ್ರ ಸಂಖ್ಯೆ:ಟಿಆರ್‌ಐ/ಮೈ/ಸಿಆರ್-86/2011-12, ದಿ:11-03-2013

******

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರಲ್ಲಿನ ಅಧಿಸೂಚನೆಯಲ್ಲಿ ಡಾ:ಟಿ.ಟಿ.ಬಸವನಗೌಡ, ಸಹ ಪ್ರಾಧ್ಯಾಪಕರು, ಮಾನವ ಶಾಸ್ತ್ರ ಅಧ್ಯಯನ ವಿಭಾಗ, ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ ಇವರನ್ನು ಪ್ರತಿ ನಿಯೋಜನೆ ಮೇರೆಗೆ ನಿರ್ದೇಶಕರು, ಗಿರಿಜನ ಸಂಶೋಧನಾ ಸಂಸ್ಥೆ, ಮೈಸೂರು, ಇಲ್ಲಿಗೆ ನೇಮಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರಲ್ಲಿನ ಸರ್ಕಾರದ ದಿ:31-7-2012ರ ಆದೇಶದಲ್ಲಿ ಸದರಿ ಅಧಿಕಾರಿಯ ನಿಯೋಜನೆಯ ಷರತ್ತು ಮತ್ತು ನಿಬಂಧನೆಗಳನ್ನು ಹೊರಡಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3)ರ ದಿನಾಂಕ: 11-3-2013ರ ಪತ್ರದಲ್ಲಿ ನಿರ್ದೇಶಕರು, ಕರ್ನಾಟಕ ರಾಜ್ಯ ಗಿರಿಜನ ಸಂಶೋಧನಾ ಸಂಸ್ಥೆ, ಮೈಸೂರು ಇವರು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿ, ದಿ: 6-2-2012 ರಂದು ನಿರ್ದೇಶಕರ ಹುದ್ದೆಯಲ್ಲಿ ಅಧಿಕಾರ ವಹಿಸಿಕೊಂಡಿದ್ದು, ದಿನಾಂಕ: 31-7-2012ರ ಸರ್ಕಾರದ ಆದೇಶದಲ್ಲಿ ಇವರ ನಿಯೋಜನೆಯ ಷರತ್ತು ಮತ್ತು ನಿಬಂಧನೆಗಳನ್ನು ಹೊರಡಿಸಲಾಗಿದ್ದು, ಸದರಿ ಷರತ್ತಿಗಳಲ್ಲಿನ ಕ್ರಮ ಸಂಖ್ಯೆ: 9ರನ್ವಯ ಇವರ ರಜಾ ವೇತನ ಮತ್ತು ನಿವೃತ್ತಿ ಅಂಶದಾನ ವಂತಿಗೆಗಳ ಮೊತ್ತವನ್ನು (Leave Salary and Pension Contribution) ಇವರ ಮಾತೃ ಇಲಾಖೆಯಾದ ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ, ಇವರಿಗೆ ಪಾವತಿಸಲು ಸರ್ಕಾರದ ಅನುಮತಿ ನೀಡುವಂತೆ ಕೋರಿರುತ್ತಾರೆ. ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಲಾಗಿದ್ದು ಅದರಂತೆ ಈ ಆದೇಶ.

- - - 2

<u>ಸರ್ಕಾರಿ ಆದೇಶ ಸಂಖ್ಯೆ: ಸಕಇ 175 ಪವಯೋ 2013, ಬೆಂಗಳೂರು ದಿನಾಂಕ:03-09-2013</u>

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ರಾಜ್ಯ ಗಿರಿಜನ ಸಂಶೋಧನಾ ಸಂಸ್ಥೆ, ಮೈಸೂರು, ಇಲ್ಲಿನ ನಿರ್ದೇಶಕರಾದ ಡಾ:ಟಿ.ಟಿ.ಬಸವನಗೌಡ, ಇವರ ರಜಾ ವೇತನ ಮತ್ತು ನಿವೃತ್ತಿ ಅಂಶದಾನವನ್ನು (Leave Salary and Pension Contribution) ದಿನಾಂಕ:31-7-2012ರಲ್ಲಿನ ಷರತ್ತು ಮತ್ತು ನಿಬಂಧನೆಗಳನ್ವಯ ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ ಇಲ್ಲಿಗೆ ಪಾವತಿಸಲು ಸರ್ಕಾರದ ಅನುಮತಿ ನೀಡಲಾಗಿದೆ.

ಈ ಆದೇಶವನ್ನು ದಿನಾಂಕ: 21-8-2012ರ ಸಂಖ್ಯೆ:ಸಕಕಾ 184 ಆಂಆಸ 2013ರ ಟಿಪ್ಪಣಿಯಲ್ಲಿ ಆಂತರಿಕ ಆರ್ಥಿಕ ಸಲಹೆಗಾರರು ನೀಡಿರುವ ಸಹಮತಿಯೊಂದಿಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶನುಸಾರ
ಮತ್ತು ಅವರ ಹೆಸರಿನಲ್ಲಿ

(ಎನ್.ನರಸಿಂಹಮೂರ್ತಿ)
ಸರ್ಕಾರದ ಅಧೀನ ಕಾರ್ಯದರ್ಶಿ-2
ಸಮಾಜ ಕಲ್ಯಾಣ ಇಲಾಖೆ.
3/9/13

<u>ಇವರಿಗೆ:</u>

1. ಮಹಾಲೇಖಪಾಲರು, (ಎ ಮತ್ತು ಇ, ಲೆಕ್ಕಪರಿಶೋಧನೆ-1, ಲೆಕ್ಕಪರಿಶೋಧನೆ-2) ಕರ್ನಾಟಕ, ಬೆಂಗಳೂರು.
2. ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ನಿರ್ದೇಶನಾಲಯ, ಬೆಂಗಳೂರು.
3. ನಿರ್ದೇಶಕರು, ಕರ್ನಾಟಕ ರಾಜ್ಯ ಗಿರಿಜನ ಸಂಶೋಧನಾ ಸಂಸ್ಥೆ, ನಂ.1540, ಅನಿಕೇತನ ರಸ್ತೆ, ಕುವೆಂಪು ನಗರ, ಮೈಸೂರು.
4. ಕುಲಸಚಿವರು, ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ.
5. ಉಪನಿರ್ದೇಶಕರು, ಖಜಾನೆ ಗಣಕಜಾಲ, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
6. ಖಜಾನಾಧಿಕಾರಿ, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
7. ಜಿಲ್ಲಾ ಖಜಾನಾಧಿಕಾರಿ, ಮೈಸೂರು.

ಪ್ರತಿ:

1. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ಇವರ ಆಪ್ತ ಕಾರ್ಯದರ್ಶಿ.
2. ಸರ್ಕಾರದ ಉಪ ಕಾರ್ಯದರ್ಶಿ-1&2 ಸಮಾಜ ಕಲ್ಯಾಣ ಇಲಾಖೆ
3. ಆಂತರಿಕ ಆರ್ಥಿಕ ಸಲಹೆಗಾರರು, ಸಮಾಜ ಕಲ್ಯಾಣ ಇಲಾಖೆ, ವಿಕಾಸ ಸೌಧ, ಬೆಂಗಳೂರು
4. ಶಾಖಾ ರಕ್ಷ ಕಡತ/ಹೆಚ್ಚುವರಿ ಪ್ರತಿ.